# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ.ಡಿ.ದೇವರಾಜು ಅರಸ್ ಜನ್ಮಶತಮಾನೋತ್ಸವ ಅಂಗವಾಗಿ 2016-17ನೇ ಸಾಲಿನಲ್ಲಿ ರಾಜ್ಯದ ಕುಡಿಯುವ ನೀರಿನ ಗುಣಮಟ್ಟದ ಬಾಧೆಗೊಳಗಾಗಿರುವ ಗ್ರಾಮೀಣ ಜನವಸತಿಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ನೀರು ಶುದ್ಧೀಕರಣ ಘಟಕಗಳ ಪೈಕಿ, **7501ನೇ** ನೀರು ಶುದ್ಧೀಕರಣ ಘಟಕದಿಂದ ಆರಂಭವಾಗಿ, ಮುಂದೆ ಅನುಷ್ಠಾನಗೊಳಿಸುವ ಎಲ್ಲಾ ನೀರು ಶುದ್ಧೀಕರಣ ಘಟಕಗಳಿಗೆ **"ಡಿ.ದೇವರಾಜು ಅರಸ್ ಶುದ್ಧ ಕುಡಿಯುವ ನೀರಿನ ಘಟಕ"** ಎಂದು ನಾಮಕರಣ ಮಾಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 21 ಗ್ರಾನೀಸ(8) 2015, ದಿನಾಂಕ:13.08.2015.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 21 ಗ್ರಾನೀಸ(8) 2015, ದಿನಾಂಕ:01.01.2016.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 21 ಗ್ರಾನೀಸ(8) 2015, ದಿನಾಂಕ:29.01.2016.
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 21 ಗ್ರಾನೀಸ(8) 2015, ದಿನಾಂಕ:01.04.2016.
5. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 21 ಗ್ರಾನೀಸ(8) 2015, ದಿನಾಂಕ:29.07.2016.
6. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 21 ಗ್ರಾನೀಸ(8) 2015, ದಿನಾಂಕ:30.07.2016.
7. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಸದಸ್ಯ ಕಾರ್ಯದರ್ಶಿ, ಡಿ.ದೇವರಾಜು ಅರಸು ಜನ್ಮ ಶತಮಾನೋತ್ಸವ ಕಾರ್ಯಕಾರಿ ಸಮಿತಿ, ಇವರ ಪತ್ರದ ಸಂಖ್ಯೆ: ಹಿಂವಕಇ/ದೇ.ಶ.ಅ/ಸಿಆರ್-105, ದಿನಾಂಕ:01.08.2016.
8. ನಿರ್ದೇಶಕರು(ಪಂ.ರಾಜ್-1) ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಅನಧಿಕೃತ ಟಿಪ್ಪಣೆ ಸಂಖ್ಯೆ: ಗ್ರಾಅಪ 553 ಗ್ರಾಪಂಅ 2016, ದಿನಾಂಕ:16.08.2016.

*****

**ಪೀಠಿಕೆ:**

ಕರ್ನಾಟಕ ಸರ್ಕಾರವು 2013-14ನೇ ಸಾಲಿನಲ್ಲಿ 1000 ಜನವಸತಿಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು, 2014-15ನೇ ಸಾಲಿನಲ್ಲಿ 2000 ಜನವತಿಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಲು ಮಂಜೂರು ಮಾಡಿರುತ್ತದೆ. ಮುಂದುವರೆದು, 2015-16ನೇ ಸಾಲಿನಲ್ಲಿ ಮಾನ್ಯ ಮುಖ್ಯ ಮಂತ್ರಿಗಳ ಬಜೆಟ್ ಭಾಷಣದಲ್ಲಿ ಘೋಷಿಸಿದಂತೆ, ರಾಜ್ಯದ ಗ್ರಾಮೀಣ ಜನವಸತಿಗಳಲ್ಲಿ 4000 ನೀರು ಶುದ್ಧೀಕರಣ ಘಟಕಗಳನ್ನು ಅನುಷ್ಠಾನಗೊಳಿಸಲು ಆದೇಶ ನೀಡಲಾಗಿದ್ದು, ಈ ಪೈಕಿ, **972** ನೀರು ಶುದ್ಧೀಕರಣ ಘಟಕಗಳನ್ನು ಸಹಕಾರ ಇಲಾಖೆಯ **ಸಹಕಾರ ಸಂಘ/ಸಂಸ್ಥೆಗಳ** ಮುಖೇನ, **4207** ನೀರು ಶುದ್ಧೀಕರಣ ಘಟಕಗಳನ್ನು **ಕೆ.ಆರ್.ಐ.ಡಿ.ಎಲ್.** ಸಂಸ್ಥೆ ಮುಖೇನ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಟೆಂಡರ್ ಕರೆದು ಅನುಮೋದನೆಯಾದ ಸಂಸ್ಥೆ/ಏಜೆನ್ಸಿಗಳ ಮುಖೇನ **3653** ನೀರು ಶುದ್ಧೀಕರಣ ಘಟಕಗಳನ್ನು ಅನುಷ್ಠಾನ ಮಾಡಲು ಕ್ರಮವಹಿಸಲಾಗಿದ್ದು, ಸದರಿ ನೀರು ಶುದ್ಧೀಕರಣ ಘಟಕಗಳು ಅನುಷ್ಠಾನದ ವಿವಿದ ಹಂತದಲ್ಲಿ ಪ್ರಗತಿಯಲ್ಲಿರುತ್ತವೆ.

ಮೇಲೆ(7)ರಲ್ಲಿ ಓದಲಾದ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಸದಸ್ಯ ಕಾರ್ಯದರ್ಶಿ, ಡಿ.ದೇವರಾಜು ಅರಸು ಜನ್ಮ ಶತಮಾನೋತ್ಸವ ಕಾರ್ಯಕಾರಿ ಸಮಿತಿರವರ ಪತ್ರದಲ್ಲಿ ಕೋರಿರುವಂತೆ ಹಾಗೂ ಮೇಲೆ(8)ರಲ್ಲಿ ಓದಲಾದ ನಿರ್ದೇಶಕರು (ಪಂ.ರಾಜ್-1) ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಅನಧಿಕೃತ ಟಿಪ್ಪಣೆಯಲ್ಲಿ ಕೋರಿರುವಂತೆ, ಶ್ರೀ.ಡಿ.ದೇವರಾಜು ಅರಸ್ ಜನ್ಮ ಶತಮಾನೋತ್ಸವ ಕಾರ್ಯಕಾರಿ ಸಮಿತಿ ತೀರ್ಮಾನಿಸಿದಂತೆ, ಈಗಾಗಲೇ ಅನುಮೋದನೆಯಾಗಿ, 2016-17ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ನೀರು ಶುದ್ಧೀಕರಣ ಘಟಕಗಳ ಪೈಕಿ **7501ನೇ** ನೀರು ಶುದ್ಧೀಕರಣ ಘಟಕದಿಂದ ಆರಂಭವಾಗಿ ಮುಂದೆ ಅನುಷ್ಠಾನಗೊಳಿಸುವ ಎಲ್ಲಾ ನೀರು ಶುದ್ಧೀಕರಣ ಘಟಕಗಳಿಗೆ **"ಡಿ.ದೇವರಾಜು ಅರಸ್ ಶುದ್ಧ ಕುಡಿಯುವ ನೀರಿನ ಘಟಕ"** ಎಂದು ನಾಮಕರಣ ಮಾಡಲು ಅಗತ್ಯ ಕ್ರಮವಹಿಸಲು ಮೇಲೆ(8)ರಲ್ಲಿ ಓದಲಾದ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ನಿರ್ದೇಶನ ಕುರಿತಂತೆ ಸರ್ಕಾರ ಕ್ರಮವಹಿಸಿದೆ. ಆದ್ದರಿಂದ ಈ ಆದೇಶ.

## ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 44 ಗ್ರಾನೀಸ(8) 2016, ದಿನಾಂಕ:06.12.2016

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಶ್ರೀ.ಡಿ.ದೇವರಾಜು ಅರಸ್ ಜನ್ಮಶತಮಾನೋತ್ಸವ ಕಾರ್ಯಕಾರಿ ಸಮಿತಿ ತೀರ್ಮಾನಿಸಿದಂತೆ, ಸರ್ಕಾರದಿಂದ ಈಗಾಗಲೇ ಅನುಮೋದನೆಯಾಗಿ, 2016-17ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ನೀರು ಶುದ್ಧೀಕರಣ ಘಟಕಗಳ ಪೈಕಿ **7501ನೇ** ನೀರು ಶುದ್ಧೀಕರಣ ಘಟಕದಿಂದ ಆರಂಭಿಸಿ, ಮುಂದೆ ಅನುಷ್ಠಾನಗೊಳಿಸುವ ಎಲ್ಲಾ ನೀರು ಶುದ್ಧೀಕರಣ ಘಟಕಗಳಿಗೆ **"ಡಿ.ದೇವರಾಜು ಅರಸ್ ಶುದ್ಧ ಕುಡಿಯುವ ನೀರಿನ ಘಟಕ"** ಎಂದು ನಾಮಕರಣ ಮಾಡಲು ಸರ್ಕಾರವು ಹರ್ಷಿಸುತ್ತದೆ.

ಈ ಆದೇಶದೊಂದಿಗೆ ಲಗತ್ತಿಸಿರುವ **ಅನುಬಂಧ-1**ರಲ್ಲಿ ಅನುಮೋದಿಸಲ್ಪಟ್ಟ ಶ್ರೀ. ಡಿ. ದೇವರಾಜು ಅರಸ್ ಜನ್ಮ **ಶತಮಾನೋತ್ಸವದ ಲೋಗೊ** ಅನ್ನು ಅಡಕವಿರಿಸಿದ್ದು, ಪ್ರಸಕ್ತ ಸಾಲಿನಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಟೆಂಡರ್ ಕರೆದು ಅನುಮೋದನೆಯಾದ ಸಂಸ್ಥೆ/ಏಜೆನ್ಸಿಗಳ ಮುಖೇನ, ಸಹಕಾರ ಇಲಾಖೆಯ **ಸಹಕಾರ ಸಂಘ/ಸಂಸ್ಥೆಗಳ** ಮುಖೇನ ಹಾಗೂ **ಕೆ.ಆರ್.ಐ.ಡಿ.ಎಲ್.ಸಂಸ್ಥೆ** ಮುಖೇನ ಅನುಷ್ಠಾನಗೊಳಿಸುತ್ತಿರುವ ನೀರು ಶುದ್ಧೀಕರಣ ಘಟಕಗಳ ಪೈಕಿ, ಇಲಾಖೆಯ **www.shuddhaneeru7000.com** ವೆಬ್‌ಸೈಟ್‌ನಲ್ಲಿನ ದಾಖಲಾತಿಯ ಪ್ರಕಾರ **7500** ನೀರು ಶುದ್ಧೀಕರಣ ಘಟಕಗಳು ಕಾರ್ಯಾಚರಿಸಲು(Commissioned) ಪ್ರಾರಂಭಿಸಿದ ದಿನದಿಂದ ಮತ್ತು **7501ನೇ** ನೀರು ಶುದ್ಧೀಕರಣ ಘಟಕದಿಂದ ಆರಂಭಿಸಿ, ಮುಂದೆ ಅನುಷ್ಠಾನಗೊಳಿಸಲಾಗುವ ಎಲ್ಲಾ ನೀರು ಶುದ್ಧೀಕರಣ ಘಟಕಗಳನ್ನು **"ಡಿ.ದೇವರಾಜು ಅರಸ್ ಶುದ್ಧ ಕುಡಿಯುವ ನೀರಿನ ಘಟಕ"** ಎಂದು ನಾಮಕರಣ ಮಾಡಲು ಎಲ್ಲಾ ಅನುಮೋದಿತ ಅನುಷ್ಠಾನ ಏಜೆನ್ಸಿ/ಸಂಸ್ಥೆಗಳು ಅಗತ್ಯ ಕ್ರಮವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಬಿ. ಕೃಷ್ಣಪ್ಪ)**
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ. ಮಹಾಲೇಖಪಾಲರು, ಮಹಾಲೇಖಪಾಲರು(ಎಯು-1)ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
8. ವಿಶೇಷಾಧಿಕಾರಿಗಳು(ಜಿಪಂ)ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು-1.
9. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು-1.
10. ನಿರ್ದೇಶಕರು(ಪಂ.ರಾಜ್-1) ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಗ್ರಾ.ಅ.&ಪಂ.ರಾಜ್ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09.
12. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ, ಗ್ರಾಮೀಣಾಭಿವೃದ್ಧಿ ಭವನ, ಆನಂದ ರಾವ್ ವೃತ್ತ, ಬೆಂಗಳೂರು-09.
13. ಸಹಕಾರ ಸಂಘಗಳ ಅಪರ ನಿಬಂಧಕರು, ಸಹಕಾರ ಇಲಾಖೆ (ಇಂಡಸ್ಟ್ರೀಯಲ್ & ಡೈರಿ), ಡಾ. ಆಲಿ ಅಸ್ಗರ್ ರಸ್ತೆ, ವಸಂತನಗರ, ಬೆಂಗಳೂರು-52.
14. ಸಹಕಾರ ಸಂಘಗಳ ಅಪರ ನಿಬಂಧಕರು, ಸಹಕಾರ ಇಲಾಖೆ. (ಪತ್ತು), ಡಾ. ಆಲಿ ಅಸ್ಗರ್ ರಸ್ತೆ, ವಸಂತನಗರ, ಬೆಂಗಳೂರು-52.
15. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09.
16. ರಾಜ್ಯದ ಎಲ್ಲಾ (30) ಜಿಲ್ಲೆಗಳ ಜಿಲ್ಲಾಧಿಕಾರಿಗಳು.
17. ರಾಜ್ಯದ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
18. ರಾಜ್ಯದ ಎಲ್ಲಾ (4) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತಗಳ ಅಧೀಕ್ಷಕ ಅಭಿಯಂತರರು,
19. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕೇಂದ್ರ ಕಛೇರಿ, ಕಾವೇರಿ ಭವನ ಬೆಂಗಳೂರು-09.
20. ರಾಜ್ಯದ ಎಲ್ಲಾ (30) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳ ಕಾರ್ಯಪಾಲಕ ಇಂಜಿನಿಯರ್‌ಗಳು.
21. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
22. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ.
23. ಆಯುಕ್ತರು ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, 'E' Block, K.H.B complex, ಕಾವೇರಿ ಭವನ, ಕೆ.ಜಿ ರಸ್ತೆ, ಬೆಂಗಳೂರು-560009ರವರ ಆಪ್ತ ಕಾರ್ಯದರ್ಶಿ.
24. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಸದಸ್ಯ ಕಾರ್ಯದರ್ಶಿ, ಡಿ.ದೇವರಾಜು ಅರಸು ಜನ್ಮ ಶತಮಾನೋತ್ಸವ ಕಾರ್ಯಕಾರಿ ಸಮಿತಿ, ನಂ-16-ಡಿ, 3ನೇ ಮಹಡಿ, ದೇವರಾಜ ಅರಸು ಭವನ, ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯ, ವಸಂತನಗರ, ಬೆಂಗಳೂರು-560052ರವರ ಆಪ್ತ ಕಾರ್ಯದರ್ಶಿ.
25. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಸಹಾಯಕರು.
26. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ನಂ.309, 3ನೇ ಮಹಡಿ, ಗೇಟ್ ನಂ.1, ಬಹುಮಹಡಿಗಳ ಕಟ್ಟಡ, ಅಂಬೇಡ್ಕರ್ ವೀಧಿ, ಬೆಂಗಳೂರು-560001.
27. ಗ್ರಾ.ಅ.ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ-(10ಪ್ರತಿಗಳು).
28. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5ಪ್ರತಿಗಳು)
29. ರಾಜ್ಯ ಪತ್ರಾಗಾರ ಇಲಾಖೆ(ಬಿಡಿ ಪ್ರತಿ ಶಾಖೆ.
30. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಅನುಬಂಧ-1

"ಸರ್ಕಾರದ ಆದೇಶ ಸಂಖ್ಯೆ: ಹಿಂವಕ/44/ಹಿಂಅಪ(೪)/೨೦೧೬, ದಿನಾಂಕ: ೦೬.೧೨.೨೦೧೬ರ ಲಗತ್ತು".



# ಡಿ.ದೇವರಾಜ ಅರಸು

## ಜನ್ಮಶತಮಾನೋತ್ಸವ

1915 - 2015

120